# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಚಾಲೆಂಜ್ ಫಂಡ್ ಯೋಜನೆಯಡಿ ಸಲ್ಲಿಸುವ ಪ್ರಸ್ತಾವನೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಲು ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ: 08-07-2010.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 54 ಇಆಸು 2020, ದಿನಾಂಕ: 02-03-2021.

********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1) ರಲ್ಲಿನ ದಿನಾಂಕ: 08-07-2010ರ ಆದೇಶದಲ್ಲಿ ಸರ್ಕಾರವು ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಜಾರಿಗೆ ತರುವ ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಿಗೆ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಿ, ಆದೇಶ ಹೊರಡಿಸಿದೆ.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿನ ದಿನಾಂಕ: 02-03-2021 ರ ಆದೇಶದಲ್ಲಿ ಚಾಲೆಂಜ್ ಫಂಡ್ ಯೋಜನೆಯಡಿ ಸಲ್ಲಿಸುವ ಪ್ರಸ್ತಾವನೆಗಳನ್ನು ಆಯ್ಕೆ ಮಾಡುವ ಉದ್ದೇಶಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಸಿಆಸುಇ (ಆಸು) ಇವರ ನೇತೃತ್ವದಲ್ಲಿ ಸಮಿತಿಯನ್ನು ಪುನರ್ ರಚಿಸಿ, ಆದೇಶಿಸಲಾಗಿದೆ.

ಚಾಲೆಂಜ್ ಫಂಡ್ ಯೋಜನೆಯಡಿ ಸಲ್ಲಿಸುವ ಪ್ರಸ್ತಾವನೆಗಳನ್ನು ಪರಿಣಾಮಕಾರಿಯಾಗಿ ಆಯ್ಕೆ ಮಾಡುವ ಸಂಬಂಧ ಖಾಸಗಿ ರಂಗದಲ್ಲಿರುವ ವಿಷಯ ತಜ್ಞರ ಅನುಭವವನ್ನು ಪಡೆಯುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯ ಆಯ್ಕೆ ಸಮಿತಿಯನ್ನು ಕೆಳಕಂಡಂತೆ ಪುನರ್ ರಚಿಸಲು ತೀರ್ಮಾನಿಸಿ, ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ(ಆಸು) 92 ಇಆಸು 2022,**
**ಬೆಂಗಳೂರು, ದಿನಾಂಕ: 20-10-2022**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅರ್ಹ ಪ್ರಸ್ತಾವನೆಗಳನ್ನು ಆಯ್ಕೆ ಮಾಡಲು ಕೆಳಕಂಡಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಸಿಆಸುಇ (ಆಸು) ಇವರ ನೇತೃತ್ವದಲ್ಲಿ ಸಮಿತಿಯನ್ನು ಪುನರ್ ರಚಿಸಲಾಗಿದೆ.

| ಕ್ರ.ಸಂ | ಅಧಿಕಾರಿಗಳ ವಿವರ | ಪದನಾಮ |
|---|---|---|
| 1 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಸಿಆಸುಇ (ಆಸು) | ಅಧ್ಯಕ್ಷರು |
| 2 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 3 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ | ಸದಸ್ಯರು |
| 4 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ | ಸದಸ್ಯರು |
| 5 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ) | ಸದಸ್ಯರು |
| 6 | ಪ್ರೊ.ಪುಲಕ್ ಘೋಷ್, ಐ.ಐ.ಎಂ, ಬೆಂಗಳೂರು | ಸದಸ್ಯರು |
| 7 | ಕು. ಸುಧಾ ಶ್ರೀನಿವಾಸನ್, The Nudge Foundation, IAF Fellowship Curator | ಸದಸ್ಯರು |
| 8 | ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) | ಸದಸ್ಯ ಕಾರ್ಯದರ್ಶಿ |

ಇಲಾಖೆಗಳ ನಿರ್ದಿಷ್ಟ ಪ್ರಸ್ತಾವನೆಗಳ ಬಗ್ಗೆ ವಿವರಿಸಲು ಆ ಇಲಾಖೆಗಳ ಪ್ರತಿನಿಧಿಗಳನ್ನು ವಿಶೇಷ ಆಹ್ವಾನಿತರಾಗಿ ಸಮಿತಿ ಸಭೆಗೆ ಆಹ್ವಾನಿಸಲಾಗುವುದು.

ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ಮೂಲ ಆದೇಶದಲ್ಲಿ ರೂಪಿಸಲಾದ ಮಾರ್ಗಸೂಚಿಗಳು ಯಥಾವತ್ತಾಗಿ ಇದರೊಂದಿಗೆ ಮುಂದುವರೆಯಲಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,
20/10/22
(ಲಕ್ಷ್ಮಣ ಬಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತರಬೇತಿ ಮತ್ತು ಮಾಹಿತಿ ಹಕ್ಕು ಶಾಖೆ).

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ) / (ಆಡಿಡ್-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, 5ನೇ ಹಂತ, ಬಹುಮಹಡಿ ಕಟ್ಟಡ.
6. ಸರ್ಕಾರದ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ), ಬಹುಮಹಡಿ ಕಟ್ಟಡ.
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
8. ಪ್ರೊ. ಪುಲಕ್ ಘೋಷ್, ಐ.ಐ.ಎಂ, ಬೆಂಗಳೂರು, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
9. ಕು.ಸುಧಾ ಶ್ರೀನಿವಾಸನ್, The Nudge Foundation, IAF Fellowship Curator, Near APJ Abdul Kalam Enclave, Aswath Nagar Service Road, 15-19, NH 44, Dodda Nekkundi Extension, Marathahalli, Bengaluru-37.
10. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಶಾಖೆ, ಸಿಆಸುಇ (ಆಸು), ಬಹುಮಹಡಿ ಕಟ್ಟಡ.
11. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ.
12. ಹೆಚ್ಚುವರಿ ಪ್ರತಿ / ಕಛೇರಿ ಪ್ರತಿ.